ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಎರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 13ನೇ ಡಿಸೆಂಬರ್, 2018

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ

2. ವಿತ್ತೀಯ ಕಾರ್ಯಕಲಾಪಗಳು

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2018–19ನೇ ಸಾಲಿನ ಪೂರಕ ಅಂದಾಜುಗಳ (ಮೊದಲನೇ ಕಂತನ್ನು) ಮಂಡಿಸುವುದು.

ಆ) 2018–19ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯ ವಾರ್ಷಿಕ ಪರಿಶೀಲನಾ ವರದಿಯನ್ನು ಮಂಡಿಸುವುದು.

3. ವರದಿಗಳನ್ನೊಪ್ಪಿಸುವುದು

1. **ಶ್ರೀ ಎಂ. ಕೃಷ್ಣಾರೆಡ್ಡಿ** (ಮಾನ್ಯ ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿ) ಅವರು 2018–19ನೇ ಸಾಲಿನ ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿಯ ಮೊದಲನೆಯ ವರದಿಯನ್ನೊಪ್ಪಿಸುವುದು.

... 2/ ..

2. **ಶ್ರೀ ಎನ್.ಎ. ಹ್ಯಾರಿಸ್** (ಅಧ್ಯಕ್ಷರು, ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ) ಅವರು –

   ಅ) ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಸರ್ಕಾರ ರೂಪಿಸಿರುವ ಯೋಜನೆ/ಕಾರ್ಯಕ್ರಮಗಳು ಹಾಗೂ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಲ್ಲಿನ ವಕ್ಫ್ ಆಸ್ತಿಗಳ ಕುರಿತಾದ **ಮಧ್ಯಂತರ ವರದಿಯನ್ನೊಪ್ಪಿಸುವುದು.**

   ಆ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಬರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಪದವಿ ಪೂರ್ವ ಕಾಲೇಜುಗಳ ಕಾರ್ಯ ಚಟುವಟಿಕೆ ಕುರಿತಾದ ಹಾಗೂ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ (ನಿ)ದ ವತಿಯಿಂದ ಈ ಸಮುದಾಯದವರ ಅಭಿವೃದ್ಧಿಗಾಗಿ ಸರ್ಕಾರ ರೂಪಿಸಿರುವ ಯೋಜನೆ/ಕಾರ್ಯಕ್ರಮಗಳ ಕುರಿತಾದ **ಮಧ್ಯಂತರ ವರದಿಯನ್ನೊಪ್ಪಿಸುವುದು.**

3. **ಶ್ರೀ ಎ.ಟಿ. ರಾಮಸ್ವಾಮಿ** (ಅಧ್ಯಕ್ಷರು, ಕರ್ನಾಟಕ ವಿಧಾನ ಸಭೆಯ ಸರ್ಕಾರಿ ಭರವಸೆಗಳ ಸಮಿತಿ) ಅವರು 2018–19ನೇ ಸಾಲಿನ ಸರ್ಕಾರಿ ಭರವಸೆಗಳ ಸಮಿತಿಯ ಮೊದಲನೆಯ ವರದಿಯನ್ನೊಪ್ಪಿಸುವುದು.

4. ಅರ್ಜಿಗಳನ್ನೊಪ್ಪಿಸುವುದು

ಶ್ರೀ ಎಂ. ಕೃಷ್ಣಾರೆಡ್ಡಿ, (ಮಾನ್ಯ ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ) ಅವರು ಈ ಕೆಳಕಂಡ ಅರ್ಜಿಗಳನ್ನು ಒಪ್ಪಿಸುವುದು:

1) ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕು, ತಿಪ್ಪಸಂದ್ರ ಹೋಬಳಿಯ ಗಂಗೋನಹಳ್ಳಿ ಗ್ರಾಮಕ್ಕೆ ಸೇರಿದ ಸರ್ಕಾರಿ ಜಮೀನಿನಲ್ಲಿ ಅಕ್ರಮವಾಗಿ ಸಾಗುವಳಿ ಮಾಡುತ್ತಿರುವುದನ್ನು ತೆರವುಗೊಳಿಸುವ ಬಗ್ಗೆ.
2) ಚಿಕ್ಕಬಳ್ಳಾಪುರ ಜಿಲ್ಲೆಯ, ಕಾಗತಿ ಗ್ರಾಮ ಪಂಚಾಯಿತಿಗೆ ಸೇರಿದ ಬೈರೆಡ್ಡಿಹಳ್ಳಿ ಗ್ರಾಮದ ಸರ್ವೆ ನಂ.14ರಲ್ಲಿನ ಜಾಗವನ್ನು ಕಾಗತಿ ಗ್ರಾಮಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಅಕ್ರಮವಾಗಿ ಖಾತೆ ಮಾಡಿಕೊಟ್ಟಿರುವ ಬಗ್ಗೆ.

... 3/ ..

3) ಬಾಗಲಕೋಟೆ ಜಿಲ್ಲೆಯ, ಹುನಗುಂದ ತಾಲ್ಲೂಕಿನ ಇಳಕಲ್ ಗ್ರಾಮೀಣ ಪೊಲೀಸ್ ಠಾಣೆಯ ಸಿ.ಪಿ.ಐ, ಪಿ.ಎಸ್.ಐ ಹಾಗೂ ಪೊಲೀಸ್ ಪೇದೆಗಳು ಅಕ್ರಮ ಗಣಿಗಾರಿಕೆ, ಸುಳ್ಳು ಪ್ರಕರಣಗಳನ್ನು ದಾಖಲಿಸಿ ಅಕ್ರಮ ದಂಧೆ ನಡೆಸುತ್ತಿದ್ದು, ಕಾನೂನು ಕ್ರಮ ಕೈಗೊಳ್ಳುವ ಬಗ್ಗೆ.

4) ಚಿಕ್ಕಬಳ್ಳಾಪುರ ಜಿಲ್ಲೆ, ಗೌರಿಬಿದನೂರು ತಾಲ್ಲೂಕಿನ, ನಗರಸಭೆಯ ವ್ಯಾಪ್ತಿಗೆ ಬರುವ ಪರಿಶಿಷ್ಟ ಜಾತಿಯವರ, ಸ್ಮಶಾನ ಜಾಗವನ್ನು ನಿವೇಶನವನ್ನಾಗಿ ಮಾರ್ಪಡಿಸಿ ಮಾರಾಟ ಮಾಡಿರುವ ಬಗ್ಗೆ.

5) ಬೆಂಗಳೂರು ನಗರದ ಎಲೆಕ್ಟ್ರಾನಿಕ್ಸ್ ಸಿಟಿ ಕೋನಪ್ಪನ ಅಗ್ರಹಾರ ಪಂಚಾಯಿತಿ ವ್ಯಾಪ್ತಿಯ ಶಾಂತಿಪುರದ ಇಂಡಿಯನ್ ಓವರ್‌ಸೀಸ್ ಬ್ಯಾಂಕ್ ಪಕ್ಕದಲ್ಲಿರುವ ರಸ್ತೆಗೆ ಡಾಂಬರೀಕರಣ ಹಾಗೂ ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಬಗ್ಗೆ.

6) ಕೊಡಗು ಜಿಲ್ಲೆಯ ಹೆರಿಟೇಜ್ ಕಾಮಗಾರಿಯಲ್ಲಿ ಅವ್ಯವಹಾರ ನಡೆದಿರುವ ಕುರಿತು.

7) ಮಡಿಕೇರಿ ಮತ್ತು ಕುಶಾಲನಗರದಲ್ಲಿ ಒಳಚರಂಡಿ ಕಾಮಗಾರಿ ಕಳಪೆಯಾಗಿರುವ ಕುರಿತು.

8) ಕೊಡಗು ಜಿಲ್ಲೆ, ಸೋಮವಾರಪೇಟೆ ತಾಲ್ಲೂಕಿನಲ್ಲಿರುವ ಆಶ್ರಯ ಮನೆಗಳ ಬಿಲ್ ಪಾವತಿ ವಿಳಂಬ ಹಾಗೂ ಮನೆಗಳನ್ನು ಬ್ಲಾಕ್ ಮಾಡಿರುವ ಕುರಿತು.

9) ಚಿಕ್ಕಮಗಳೂರು ಜಿಲ್ಲೆ, ಕಡೂರು ತಾಲ್ಲೂಕಿನ ಕಸಬ ಟೌನ್ ಸರ್ವೆ ನಂ.128ರಲ್ಲಿ ಸರ್ಕಾರಿ ರಸ್ತೆಯ ಅಕ್ಕ-ಪಕ್ಕದಲ್ಲಿ ಮತ್ತು ಕನ್ಸರ್ವೆನ್ಸಿ ಜಾಗವನ್ನು ಒತ್ತುವರಿ ಮಾಡಿ ನಿರ್ಮಾಣ ಮಾಡುತ್ತಿರುವ ಕಟ್ಟಡಗಳನ್ನು ತೆರವುಗೊಳಿಸುವ ಕುರಿತು.

10) ಬೆಂಗಳೂರು ನಗರ ವ್ಯಾಪ್ತಿಯ ಸೂರ್ಯನಗರದಲ್ಲಿ ಹಂಚಿಕೆಯಾದ ನಿವೇಶನಗಳಿಗೆ 05 ವರ್ಷ ಪೂರ್ಣಗೊಂಡಿದ್ದು, ಸದರಿ ಫಲಾನುಭವಿಗಳಿಗೆ ಶುದ್ಧ ಕ್ರಯ ಪತ್ರ ನೀಡುವ ಬಗ್ಗೆ.

11) ಬೆಂಗಳೂರು ದಕ್ಷಿಣ ತಾಲ್ಲೂಕು ಕೆಂಗೇರಿ ಹೋಬಳಿಯ ಕುಂಬಳಗೋಡು ಗ್ರಾಮ ಪಂಚಾಯಿತಿಯಲ್ಲಿನ ಸರ್ಕಾರಿ ಜಮೀನುಗಳಿಗೆ ನಕಲಿ ದಾಖಲೆಗಳನ್ನು ಸೃಷ್ಟಿಸಿರುವ ಕುರಿತು.

12) ಚಿಂತಾಮಣಿ ತಾಲ್ಲೂಕು, ಮುರುಗಮಲ್ಲಾ ಹೋಬಳಿಯ ಮುಗಲಮರಿ ಗ್ರಾಮಕ್ಕೆ ಸೇರಿದ ಕೆಲವು ಸರ್ವೆ ನಂಬರುಗಳಿಗೆ ಒಳಪಟ್ಟಿರುವ ಸರ್ಕಾರಿ ಜಾಗದಲ್ಲಿ ಅಕ್ರಮವಾಗಿ ಉಳಿಮೆ ಮಾಡಿಕೊಂಡು ಅಕ್ಕ-ಪಕ್ಕದ ಜಮೀನುದಾರರಿಗೆ ದಾರಿ ಬಿಡದೆ ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿರುವ ಬಗ್ಗೆ.

13) ಅಂಗವಿಕಲರ ಸಾಧನ ಸಲಕರಣೆ ಖರೀದಿಯಲ್ಲಿ ಇಲಾಖೆಯ ನಿರ್ದೇಶಕರು 32 ಕೋಟಿ ರೂ. ಭ್ರಷ್ಟಾಚಾರವೆಸಗಿದ್ದು ಹಾಗೂ ಅಕ್ರಮ ನೇಮಕಾತಿ ಮಾಡಿಕೊಂಡು ಮುಂಬಡ್ತಿ ನೀಡಿರುವುದನ್ನು ರದ್ದುಪಡಿಸಿ, ಸೂಕ್ತ ಕಾನೂನು ಕ್ರಮ ಕೈಗೊಳ್ಳುವ ಬಗ್ಗೆ.

... 4/ ..

5. ಶಾಸನ ರಚನೆ

I. ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2018ನೇ ಸಾಲಿನ ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2018ನೇ ಸಾಲಿನ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. ಶ್ರೀ ಬಂಡೆಪ್ಪ ಖಾಶೆಂಪೂರ (ಮಾನ್ಯ ಸಹಕಾರ ಸಚಿವರು) ಅವರು:–

ಅ) 2018ನೇ ಸಾಲಿನ ಕರ್ನಾಟಕ ಋಣ ಪರಿಹಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. ಶ್ರೀ ಶಿವಾನಂದ ಎಸ್.ಪಾಟೀಲ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) ಅವರು:–

ಅ) 2018ನೇ ಸಾಲಿನ ಕರ್ನಾಟಕ ಜೀವರಕ್ಷಕ ಮತ್ತು ವೈದ್ಯಕೀಯ ವೃತ್ತಿನಿರತರ (ತುರ್ತು ಸನ್ನಿವೇಶಗಳಲ್ಲಿ ರಕ್ಷಣೆ ಮತ್ತು ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಕೆ.ಎಂ.ಶಿವಲಿಂಗೇಗೌಡ, ಕೆ.ಎಸ್.ಲಿಂಗೇಶ್ ಮತ್ತು ಸಿ.ಎನ್.ಬಾಲಕೃಷ್ಣ ಇವರುಗಳು** – ಎತ್ತಿನಹೊಳೆ ಕುಡಿಯುವ ನೀರಿನ ಯೋಜನೆಯಡಿಯಲ್ಲಿ ಸಕಲೇಶಪುರ, ಬೇಲೂರು ಮತ್ತು ಅರಸೀಕೆರೆ ತಾಲ್ಲೂಕುಗಳಲ್ಲಿನ ರೈತರಿಗೆ ಪರಿಹಾರ ನೀಡುವಲ್ಲಿ ವಿಳಂಬವಾಗುತ್ತಿದ್ದು ಯೋಜನೆಯನ್ನು ತ್ವರಿತಗೊಳಿಸುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

... 5/ ..

2) **ಶ್ರೀಯುತರುಗಳಾದ ಗೋವಿಂದ.ಎಂ.ಕಾರಜೋಳ, ಎಂ.ಪಿ.ರೇಣುಕಾಚಾರ್ಯ ಮತ್ತು ಕಳಕಪ್ಪ ಗುರುಶಾಂತಪ್ಪ ಬಂಡಿ ಇವರುಗಳು** – ಬಾಗಲಕೋಟೆ ಜಿಲ್ಲೆಯ ಜಮಖಂಡಿ, ಮುಧೋಳ, ಬೀಳಗಿ ತಾಲ್ಲೂಕುಗಳಲ್ಲಿನ ಕೃಷಿ ಭೂಮಿಗೆ ನೀರಾವರಿ ಸೌಲಭ್ಯ ಒದಗಿಸುವ ಸಂಬಂಧ ಸಸಾಲಟ್ಟಿ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಜೆ.ಸಿ.ಮಾಧುಸ್ವಾಮಿ, ಅರಗ ಜ್ಞಾನೇಂದ್ರ ಮತ್ತು ಎಸ್.ಕುಮಾರ ಬಂಗಾರಪ್ಪ ಇವರುಗಳು** – ರಾಜ್ಯದಲ್ಲಿ ಭೂ ಅಭಿವೃದ್ಧಿ ಬ್ಯಾಂಕುಗಳು ತೀವ್ರ ದುಸ್ಥಿತಿಯಲ್ಲಿದ್ದು ಕಾರ್ಯ ಮಾಡುವ ಸ್ಥಿತಿಯಲ್ಲಿ ಇಲ್ಲದೇ ಇರುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

4) **ಶ್ರೀಯುತರುಗಳಾದ ಬಿ.ಎಸ್.ಯಡಿಯೂರಪ್ಪ, ಗೋವಿಂದ.ಎಂ.ಕಾರಜೋಳ, ಜಗದೀಶ್ ಶೆಟ್ಟರ್ ಮತ್ತಿತರರು** – ರಾಜ್ಯದಲ್ಲಿ ನೂರಕ್ಕೂ ಹೆಚ್ಚು ತಾಲ್ಲೂಕುಗಳಲ್ಲಿ ಬರಗಾಲದಿಂದ ರೈತರು ಕಂಗಾಲಾಗಿ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.

7. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ದೊಡ್ಡನಗೌಡರ ಮಹಾಂತೇಶ ಬಸವಂತರಾಯ್ ಅವರು** – ಕಿತ್ತೂರನ್ನು ತಾಲ್ಲೂಕು ಕೇಂದ್ರವಾಗಿ ಘೋಷಣೆ ಮಾಡಿ, ಸುಮಾರು 7 ವರ್ಷ ಕಳೆದರೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಹಣ ನೀಡದೇ ಇರುವುದರಿಂದ ಅಲ್ಲಿನ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿದ್ದು ತಾಲ್ಲೂಕಿನ ಸಮಗ್ರ ಅಭಿವೃದ್ಧಿಗಾಗಿ ವಿಶೇಷ ಪ್ಯಾಕೇಜ್ ನೀಡುವ ಬಗ್ಗೆ ಮಾನ್ಯ ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

2) **ಶ್ರೀಮತಿ ಕೆ.ಪೂರ್ಣಿಮಾ ಮತ್ತು ಶ್ರೀ ಜೆ.ಸಿ.ಮಾಧುಸ್ವಾಮಿ ಅವರು** – ತೆಂಗಿನ ಬೆಳೆಯು ಮಳೆಯ ಅಭಾವದಿಂದ / ವಿವಿಧ ರೋಗಗಳಿಂದ ನಾಶವಾಗುತ್ತಿದ್ದು, ಒಂದು ಗಿಡಕ್ಕೆ ರೂ.400/- ರಂತೆ ಪರಿಹಾರ ಮೊತ್ತ ನೀಡಲು ಪ್ರಸ್ತಾಪವಿದ್ದು, ಸದರಿ ಪರಿಹಾರ ಮೊತ್ತವು ಅವೈಜ್ಞಾನಿಕವಾಗಿರುವುದರಿಂದ ಅದನ್ನು ಪರಿಷ್ಕರಿಸಿ ಹೆಚ್ಚಿಸುವ ಬಗ್ಗೆ ಮಾನ್ಯ ತೋಟಗಾರಿಕಾ ಸಚಿವರ ಗಮನ ಸೆಳೆಯುವುದು.

... 6/ ..

3) **ಶ್ರೀಮತಿ ಲಕ್ಷ್ಮೀ ಆರ್.ಹೆಬ್ಬಾಳ್ಕರ್ ಅವರು** – ಬೆಳಗಾವಿ ಗ್ರಾಮೀಣ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹಲಗಾ, ಕೊಂಡಸಕೊಪ್ಪ, ಬಸ್ತವಾಡ, ಕಮಕಾರಕಟ್ಟಿ ಹಾಗೂ ರಕ್ಕಸಕೊಪ್ಪ ಗ್ರಾಮಗಳಲ್ಲಿ ಕುಡಿಯುವ ನೀರಿನ ತೊಂದರೆ ಇರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

4) **ಶ್ರೀ ಸಿ.ಟಿ.ರವಿ ಹಾಗೂ ಶ್ರೀ ಬೆಳ್ಳಿಪ್ರಕಾಶ್ ಇವರುಗಳು** – ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯು ಸಮರ್ಪಕವಾಗಿ ಅನುಷ್ಠಾನವಾಗದೇ ಇರುವುದು ಹಾಗೂ ಆ ಯೋಜನೆಯಲ್ಲಿನ ಮಾರ್ಗಸೂಚಿಯಲ್ಲಿ ಕೆಲವೊಂದು ಬದಲಾವಣೆ ತರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

5) **ಶ್ರೀ ಎನ್.ಎ. ಹ್ಯಾರೀಸ್ ಅವರು** – ರಾಜ್ಯದಲ್ಲಿ ಮತದಾರರ ಪಟ್ಟಿಗೆ ಹೆಸರನ್ನು ಸೇರ್ಪಡೆಗೊಳಿಸುವ ಪ್ರಕ್ರಿಯೆಯಲ್ಲಿ ಹಲವಾರು ಲೋಪದೋಷಗಳಿದ್ದು, ಅದರಲ್ಲೂ ವಿಶೇಷವಾಗಿ ವಿದೇಶಗಳಲ್ಲಿ ನೆಲೆಸಿದ ನಂತರ ದೇಶಕ್ಕೆ ಹಿಂದಿರುಗುವವರು ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಲು ಹೆಚ್ಚು ತೊಂದರೆ ಅನುಭವಿಸುತ್ತಿದ್ದು, ನೈಜ ಭಾರತೀಯ ವಾಸಿಗಳು ಮತದಾರರ ಪಟ್ಟಿಗೆ ತಮ್ಮ ಹೆಸರನ್ನು ಸೇರ್ಪಡೆಗೊಳಿಸುವ ಪ್ರಕ್ರಿಯೆಯನ್ನು ಸರಳಗೊಳಿಸುವ ಬಗ್ಗೆ ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

6) **ಶ್ರೀ ಸಿ.ಟಿ.ರವಿ, ಶ್ರೀ ಎಸ್.ಸುರೇಶ್ ಕುಮಾರ್ ಮತ್ತು ಶ್ರೀ ಪ್ರೀತಮ್‌ಗೌಡ ಇವರುಗಳು** – ಕೆ.ಎಸ್.ಆರ್.ಪಿ., ಐ.ಆರ್.ಬಿ. ಮತ್ತು ಕೆ.ಎಸ್.ಐ.ಎಸ್.ಎಫ್. ನಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಅಂತಿಮ ಆಯ್ಕೆ ಪಟ್ಟಿಯನ್ನು 2014ನೇ ಸಾಲಿನಲ್ಲಿ ಪ್ರಕಟಿಸಿದ್ದು ಆಯ್ಕೆಗೊಂಡಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶವನ್ನು ನೀಡುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

7) **ಶ್ರೀ ಟಿ.ಡಿ. ರಾಜೇಗೌಡ ಅವರು** – ಕರ್ನಾಟಕ ಲೋಕಸೇವಾ ಆಯೋಗದ ಪರೀಕ್ಷೆಗಳು ಹಾಗೂ ನೆಟ್ ಪರೀಕ್ಷೆಗಳನ್ನು ಒಂದೇ ದಿನ ಅಂದರೆ ದಿನಾಂಕ: 16.12.2018ರಂದು ನಡೆಸಲು ನಿಗದಿಪಡಿಸಿರುವುದರಿಂದ ಸಾವಿರಾರು ವಿದ್ಯಾರ್ಥಿಗಳು ಸಂಕಷ್ಟಕ್ಕೆ ಸಿಲುಕಿರುವ ವಿಷಯದ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

8) **ಶ್ರೀ ಗೂಳಿಹಟ್ಟಿ.ಡಿ.ಶೇಖರ್ ಅವರು** – ಚಿತ್ರದುರ್ಗದ ಹೊಸದುರ್ಗ ತಾಲ್ಲೂಕಿನ ವಾಣಿ ವಿಲಾಸ ಸಾಗರದ ಹಿನ್ನೀರು ಮುಳುಗಡೆ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಮಾಡದಕೆರೆ, ಮತ್ತೋಡು ಮತ್ತು ಶ್ರೀರಾಂಪುರ ಹೋಬಳಿಗಳ ಸಂಪರ್ಕಕ್ಕೆ ಅವಶ್ಯವಿರುವ ಸೇತುವೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

... 7/ ..

9) **ಶ್ರೀ ಬಸನಗೌಡ ದದ್ದಲ ಅವರು** – ರಾಯಚೂರು ಗ್ರಾಮೀಣ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿನ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರ ವಸತಿಗೆ ಗುರುಭವನಗಳಿಲ್ಲದೇ ಇರುವುದರಿಂದ ಆಗುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

10) **ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು** – ರಾಜ್ಯದಲ್ಲಿ ಖಾತಾ ಬದಲಾವಣೆ, ಮನೆ ನಂಬರ್ ಪಡೆದುಕೊಳ್ಳುವುದು ಮುಂತಾದ ಕಾರ್ಯಗಳಲ್ಲಿ ಸಾರ್ವಜನಿಕರು ಅನುಭವಿಸುತ್ತಿರುವ ತೊಂದರೆ ಪರಿಹರಿಸುವ ಸಂಬಂಧ ಸರ್ಕಾರದಿಂದ ಹೊರಡಿಸಲಾದ ಸರಳೀಕೃತ ಆದೇಶವು ತಂತ್ರಾಂಶದಲ್ಲಿ ಲಭ್ಯವಿಲ್ಲದೇ ಇ–ಸ್ವತ್ತಿನ ಸಮಸ್ಯೆ ಉಂಟಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

11) **ಶ್ರೀ ವಿ. ಸುನೀಲ್ ಕುಮಾರ್ ಅವರು** – 2017–18ರ ಆಯವ್ಯಯದಲ್ಲಿ ಘೋಷಿಸಿರುವಂತೆ ವಿಧಾನ ಸಭಾ ಕ್ಷೇತ್ರವಾರು 5 ಗ್ರಾಮಗಳನ್ನು "ಮಾದರಿ ವಿದ್ಯುತ್ ಗ್ರಾಮ" ಗಳನ್ನಾಗಿ ಪರಿವರ್ತಿಸಲು ಉದ್ದೇಶಿಸಿರುವಂತೆ ಕಾರ್ಕಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ 5 ಗ್ರಾಮಗಳನ್ನು "ಮಾದರಿ ವಿದ್ಯುತ್ ಗ್ರಾಮ" ಗಳನ್ನಾಗಿ ಪರಿವರ್ತಿಸಲು ಇದುವರೆಗೆ ಕ್ರಮ ಕೈಗೊಳ್ಳದೇ ಇರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

8. ಅರ್ಧ ಗಂಟೆ ಕಾಲಾವಧಿ ಚರ್ಚೆ

1) **ಶ್ರೀ ಬೋಪಯ್ಯ ಕೆ.ಜಿ.** ಇವರು "ಸಾಲ ಮನ್ನಾ ಯೋಜನೆ" ಕುರಿತು **ದಿನಾಂಕ: 12.12.2018** ರಂದು ಸದನದಲ್ಲಿ ಉತ್ತರಿಸುವ 3ನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 35(1354)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

2) **ಶ್ರೀ ಗೂಳಿಹಟ್ಟಿ ಡಿ. ಶೇಖರ್ ಮತ್ತು ಶ್ರೀಮತಿ ಕೆ. ಪೂರ್ಣಿಮ ಇವರುಗಳು**– ಚಿತ್ರದುರ್ಗ ಜಿಲ್ಲೆಯಲ್ಲಿ ಅಕ್ರಮ ಮರಳು ಹಾಗೂ ಕಲ್ಲು ಗಣಿ ಗುತ್ತಿಗೆಗಳನ್ನು ತಡೆಯುವುದರ ಜೊತೆಗೆ ಸ್ಥಳೀಯವಾಗಿ ಪಟ್ಟಾ ಜಮೀನು, ಹಳ್ಳ–ಕುಂಟೆಗಳಲ್ಲಿ ಲಭ್ಯವಾಗುವ ಮರಳನ್ನು ಮರು ಮಾರಾಟ ಮಾಡಲು ಅವಕಾಶ ನೀಡದೇ ಸರ್ಕಾರಿ ಕಾಮಗಾರಿಗಳಿಗೆ ಬಳಸಲು ಅನುಮತಿ ನೀಡುವ ವಿಚಾರಕ್ಕೆ ಸಂಬಂಧಪಟ್ಟಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

3) **ಶ್ರೀ ಈ. ತುಕರಾಂ ಇವರು** – ಚಿತ್ರದುರ್ಗ, ಬಳ್ಳಾರಿ ಮತ್ತು ತುಮಕೂರು ಜಿಲ್ಲೆಗಳಲ್ಲಿ 2011ರಿಂದ 2018ರವರೆಗೆ ಕ್ರೋಢೀಕರಿಸಿರುವ ಒಟ್ಟು ಎಸ್.ಪಿ.ವಿ. (ಕೆ.ಎಂ.ಎ.ಆರ್.ಸಿ.) ಮೊತ್ತದ ವಿವರಗಳ ಬಗ್ಗೆ ಹಾಗೂ ಗಣಿ ಬಾಧಿತ ಪ್ರದೇಶಗಳ ಪುನಶ್ಚೇತನ ಸಮಿತಿಯ ವತಿಯಿಂದ ಗಣಿ ಬಾಧಿತ ಪ್ರದೇಶಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ ಅರ್ಧ ಗಂಟೆ ಕಾಲ ಚರ್ಚಿಸುವುದು.

... 8/ ..

4) ಶ್ರೀ ಎ.ಎಸ್. ಜಯರಾಮ್ (ಮಸಾಲಾ ಜಯರಾಮ್) ಇವರು –ತುರುವೇಕೆರೆ ತಾಲ್ಲೂಕಿನ ಕೆಲವು ಪ್ರದೇಶಗಳಲ್ಲಿ ಹೊಸ ವಿದೇಶಿ ಕಳೆ (ಆಂಬ್ರೋಸಿಯ ಪ್ಸಿಲೋಸ್ಟೇಕಿಯ) ಹರಡಿರುವುದರಿಂದ ಅಲ್ಲಿನ ಕೃಷಿ / ತೋಟಗಾರಿಕೆ ಬೆಳೆಗಳು ನಾಶವಾಗುತ್ತಿದ್ದು ರೈತರು ಆರ್ಥಿಕ ಸಂಕಷ್ಟಕ್ಕೊಳಗಾಗಿರುವ ವಿಷಯಕ್ಕೆ ಸಂಬಂಧಪಟ್ಟಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

9. ಖಾಸಗಿ ಸದಸ್ಯರ ಕಾರ್ಯಕಲಾಪಗಳು

ನಿರ್ಣಯ

ಶ್ರೀ ಅಭಯ್ ಪಾಟೀಲ್ ಅವರು ಈ ಕೆಳಕಂಡ ನಿರ್ಣಯಗಳನ್ನು ಮಂಡಿಸುವುದು:

1) “ ಬೆಳಗಾವಿ ಹಾಗೂ ಉತ್ತರ ಕರ್ನಾಟಕದ ಪರಿಸರದಲ್ಲಿ ಹಲವಾರು ಶೈಕ್ಷಣಿಕ ವಿದ್ಯಾ ಸಂಸ್ಥೆಗಳು ಇದ್ದು, ಇಲ್ಲಿ ಹೆಚ್ಚು ವಿದ್ಯಾವಂತ ಯುವಕರು ನಿರುದ್ಯೋಗಿಗಳಾಗಿದ್ದು, ಉದ್ಯೋಗವನ್ನು ಅರಸಿ ಇತರ ರಾಜ್ಯಗಳಿಗೆ ವಲಸೆ ಹೋಗುತ್ತಿರುವುದನ್ನು ತಪ್ಪಿಸಲು ಹಾಗೂ ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿಗಾಗಿ ಬೆಳಗಾವಿಯಲ್ಲಿ ಒಂದು ಬೃಹತ್ ಪ್ರಮಾಣದ ಐಟಿ ಪಾರ್ಕ್‌ನ್ನು ಸ್ಥಾಪಿಸುವುದು ಅವಶ್ಯಕವಾಗಿದ್ದು, ರಾಷ್ಟ್ರೀಯ ಹೆದ್ದಾರಿ ಸಂಖ್ಯೆ:4 ಕ್ಕೆ ಹೊಂದಿಕೊಂಡಿರುವ ಬೆಳಗಾವಿ ಗ್ರಾಮದ ಸರ್ವೇ ನಂ.1304 ರಿಂದ 1349 ರವರೆಗೆ ಇರುವ ಸುಮಾರು 744 ಎಕರೆ 34 ಗುಂಟೆಯಷ್ಟು ಜಮೀನು ರಾಜ್ಯ ಸರ್ಕಾರಕ್ಕೆ ಸೇರಿದ್ದು, ಈ ಸ್ಥಳದಲ್ಲಿ ಬೃಹತ್ ಪ್ರಮಾಣದ ಐಟಿ ಪಾರ್ಕ್‌ನ್ನು ಸ್ಥಾಪಿಸಲು ರಾಜ್ಯ ಸರ್ಕಾರವು ಕೂಡಲೇ ಕ್ರಮ ಕೈಗೊಳ್ಳಬೇಕೆಂದು ಈ ಸದನವು ಒತ್ತಾಯಿಸುತ್ತದೆ.”

2) “ನಮ್ಮ ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹೋರಾಡಿರುವ ಗಣ್ಯ ವ್ಯಕ್ತಿಗಳ ಹಾಗೂ ಅವರ ಐತಿಹಾಸಿಕ ಸ್ಮಾರಕಗಳನ್ನು ನಿರ್ಮಿಸುವ ಮುಖಾಂತರ ಇಂದಿನ ಯುವ ಪೀಳಿಗೆಗೆ ಅದನ್ನು ಪರಿಚಯಿಸುವುದು ಹಾಗೂ ಸ್ವಾತಂತ್ರ್ಯ ಹೋರಾಟಗಾರರನ್ನು ಸ್ಮರಿಸಿಕೊಳ್ಳುವುದು ಈ ಸಂದರ್ಭದಲ್ಲಿ ಅತ್ಯಂತ ಅವಶ್ಯಕವಾಗಿರುತ್ತದೆ. ಆದ್ದರಿಂದ ಈ ವೀರಯೋಧರುಗಳ ಜೀವನ ಚರಿತ್ರೆಗಳನ್ನು ಮಾದರಿ ರೂಪದಲ್ಲಿ ಸ್ಥಾಪಿಸುವ, ವಿಜ್ಞಾನಿಗಳ ಮತ್ತು ಸ್ವತಂತ್ರ ಭಾರತಕ್ಕೆ ಹೋರಾಡಿದ ಮಹಾನ್ ವ್ಯಕ್ತಿಗಳ ಜನ್ಮಸ್ಥಳ, ಕರ್ಮಭೂಮಿ, ಜೀವನ ಚರಿತ್ರೆ ಹಾಗೂ ಸ್ಮಾರಕಗಳ ಪ್ರತಿರೂಪತೆಯ ಪಳೆಯುಳಿಕೆಗಳನ್ನು ಒಂದೇ ಪರಿಸರದಲ್ಲಿ ಸ್ಥಾಪಿಸುವುದರಿಂದ ಇಂದಿನ ಯುವಕರಲ್ಲಿ ದೇಶಾಭಿಮಾನವನ್ನು ಹೆಚ್ಚಿಸುವುದರ ಜೊತೆಗೆ ಉತ್ತರ ಕರ್ನಾಟಕದ ಭಾಗದಲ್ಲಿ ಬೆಳಗಾವಿಯನ್ನು ಮಾದರಿ ಪ್ರವಾಸೋದ್ಯಮ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸಲು ಅವಕಾಶವಾಗುವುದರಿಂದ ಬೆಳಗಾವಿ ತಾಲ್ಲೂಕಿನ ಮಚ್ಚೆ ಗ್ರಾಮದ ಸರ್ವೇ ನಂ.559, 560, 561 ಹಾಗೂ 583ರಲ್ಲಿರುವ ಸುಮಾರು 317 ಎಕರೆ ಸರ್ಕಾರಿ ಜಮೀನಿನಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರದ ಸಂಯುಕ್ತ ಅನುದಾನದಲ್ಲಿ ಐತಿಹಾಸಿಕ ಸ್ಮಾರಕಗಳ ಮಾದರಿಗಳನ್ನು (ರಿಪ್ಲಿಕಾಗಳನ್ನು) ನಿರ್ಮಿಸಬೇಕೆಂದು ಈ ಸದನವು ಒತ್ತಾಯಿಸುತ್ತದೆ.”

ಎಸ್. ಮೂರ್ತಿ
ಕಾರ್ಯದರ್ಶಿ
